37

37

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಕೆ.ಪ್ರತಾಪಸಿಂಹ ನಾಯಕ್ ಇವರ ನಿಯಮ 330 ಕ್ಕೆ ಉತ್ತರ.**

**ಸೂಚನೆ:**

ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಕುಡುಬಿ' ಸಮುದಾಯದ ಸುಮಾರು 1.25 ಲಕ್ಷ ಮಂದಿ ಇದ್ದಾರೆ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 'ಕುಡುಂಬನ್' ಎಂದು ತಪ್ಪಾಗಿ ಹೆಸರು ಉಲ್ಲೇಖಿಸಿದ ಪರಿಣಾಮ ಕಳೆದ 70 ವರ್ಷಗಳಿಂದ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇರುವ 'ಕುಡುಬಿ' ಸಮುದಾಯಕ್ಕೆ ಸರ್ಕಾರದ ಯಾವುದೇ ಸವಲತ್ತುಗಳು ಸಿಗುತ್ತಿಲ್ಲ. 1956 ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಕುಡುಬಿ' ಎಂದು ಜಾತಿಯನ್ನು ಸೇರಿಸುವ ಬದಲು 'ಕುಡುಂಬನ್' ಎಂದು ತಪ್ಪಾಗಿ ಸೇರಿಸಲಾಗಿದೆ.

'ಕುಡುಬಿ' ಜನಾಂಗದ ಕುಲಶಾಸ್ತ್ರೀಯ ಅಧ್ಯಯನದ ವರದಿ 2008 ರಲ್ಲಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು, ಅದರಲ್ಲಿ 'ಕುಡುಬಿ' ಜಾತಿಯನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಈಗಾಗಲೇ ಶಿಫಾರಸ್ಸು ಮಾಡಲಾಗಿದೆ. ಆದರೆ ಅದು ಇನ್ನೂ ಕಾರ್ಯಗತಗೊಂಡಿಲ್ಲ.

ಸೂಕ್ತ ತಿದ್ದುಪಡಿ ಮಾಡುವ ಮೂಲಕ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 'ಕುಡುಬಿ' ಎಂದು ಇದುವರೆಗೂ ಸೇರಿಸದೇ ಇರುವುದರಿಂದ, 'ಕುಡುಬಿ' ಸಮುದಾಯ ಇಂದಿಗೂ ಸರ್ಕಾರದ ಸವಲತ್ತುಗಳಿಂದ ವಂಚಿತರಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ :**

ಭಾರತ ಸಂವಿಧಾನದ ಅನುಚ್ಛೇದ 341 (2)ರ ಪ್ರಕಾರ ಯಾವುದೇ ಜಾತಿ ಅಥವಾ ಉಪಜಾತಿಯನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸುವ / ಬದಲಾಯಿಸುವ ಅಧಿಕಾರ ಭಾರತದ ಸಂಸತ್‌ಗೆ ಇರುತ್ತದೆ. ರಾಜ್ಯ ಸರ್ಕಾರಕ್ಕೆ ಈ ರೀತಿಯ ಅಧಿಕಾರ ಇರುವುದಿಲ್ಲ. ಆದ್ದರಿಂದ, ಕುಡುಬಿ ಸಮುದಾಯವನ್ನು ಕುಡುಂಬಣ್ ಎಂದು ಪರಿಗಣಿಸಿ, ಪರಿಶಿಷ್ಟ ಜಾತಿ ಸೌಲಭ್ಯವನ್ನು ನೀಡಲು ಸಾಧ್ಯವಿರುವುದಿಲ್ಲ.

ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1ರ ಜಾತಿ ಪಟ್ಟಿಯ ಕ್ರ.ಸಂ:30ರಲ್ಲಿರುವ ಕುಡುಬಿ ಜನಾಂಗವನ್ನು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡುವ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ನಿರ್ದೇಶಕರು, ಇನ್ಸ್ಟಿಟ್ಯೂಟ್ ಫಾರ್ ಸೋಷಿಯಲ್ ಅಂಡ್ ಎಕನಾಮಿಕಲ್ ಚೇಂಜ್, ಬೆಂಗಳೂರು ಇವರಿಗೆ ಆದೇಶಿಸಲಾಗಿತ್ತು. ಸದರಿ ಸಂಸ್ಥೆಯು ಅಧ್ಯಯನ ವರದಿಯನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ಅಧ್ಯಯನ ವರದಿಯನ್ನು ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯಿಂದ ಪರಿಶೀಲಿಸಲಾಗುತ್ತಿದೆ.

**ಕಡತ ಸಂಖ್ಯೆ: SWD 526 SLP 2024**

**(ಡಾ: ಹೆಚ್.ಸಿ. ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು